**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 93 ಕೆಎಸ್‌ಎಸ್ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:-04.04.2017

**ಅಧಿಸೂಚನೆ**

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ವೃಂದದ ಅಧಿಕಾರಿಗಳ ತಾತ್ಕಾಲಿಕ ಜೇಷ್ಠತಾ (ದಿ: 30.06.2014ರಲ್ಲಿದ್ದಂತೆ) ಪಟ್ಟಿಗೆ ಸೇರ್ಪಡೆ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 129 ಕೆಎಸ್‌ಎಸ್ 2013 ದಿನಾಂಕ 21.08.2013.
2) ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 168 ಕೆಎಸ್‌ಎಸ್ 2014 ದಿನಾಂಕ 25.09.2014.
3) ಸರ್ಕಾರದ ಅಧಿಸೂಚನೆ ಸಂಖ್ಯೆ:ಗ್ರಾಅಪ 241 ಕೆಎಸ್‌ಎಸ್ 2015 ದಿನಾಂಕ 21.10.2016.

*******

ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ವೃಂದದಲ್ಲಿ ದಿನಾಂಕ 30.06.2014ರಲ್ಲಿದ್ದಂತೆ ಉಲ್ಲೇಖಿತ ಅಧಿಸೂಚನೆ-2ರಲ್ಲಿ ದಿನಾಂಕ 25.09.2014ರಂದು ಪ್ರಕಟಿಸಿರುವ ಅಂತಿಮ ಜೇಷ್ಠತಾ ಪಟ್ಟಿಯಲ್ಲಿ ಈ ಕೆಳಕಂಡ ಭಾದಿತ ಅಧಿಕಾರಿಗಳು ಸದರಿ ವೃಂದಕ್ಕೆ ಸ್ಥಾನಪನ್ನ ಮುಂಬಡ್ತಿ ಹೊಂದಿಲ್ಲದೆ ಇರುವುದರಿಂದ ಅವರುಗಳಿಗೆ ಜೇಷ್ಠತೆ ಸಂಖ್ಯೆಯನ್ನು ನೀಡಿರುವುದಿಲ್ಲ. ಸದರಿ ಅಧಿಕಾರಿಗಳಿಗೆ ಉಲ್ಲೇಖಿತ-3ರ ಅಧಿಸೂಚನೆಯಲ್ಲಿ ದಿನಾಂಕ 13.08.2013ರಿಂದ ಜಾರಿಗೆ ಬರುವಂತೆ ಪೂರ್ವಾನ್ವಯವಾಗಿ ಸ್ಥಾನಪನ್ನ ಮುಂಬಡ್ತಿ ನೀಡಿ ಆದೇಶಿಸಲಾಗಿದೆ. ಅದರಂತೆ, ಈ ಆದೇಶದಲ್ಲಿದ ಪ್ರಕಾರ ಭಾದಿತರಾದ ಈ ಕೆಳಕಂಡ ನಿವೃತ್ತ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ)ಗಳಿಗೆ ಕೆಳಕಂಡಂತೆ ಜೇಷ್ಠತೆಯನ್ನು ನಿಗಧಿಪಡಿಸಿ, ಆದೇಶಿಸಿದೆ.

| ಕ್ರ. ಸಂ. | ಸ.ನಿ.(ಗ್ರಾ.ಉ) ಹುದ್ದೆಯಲ್ಲಿ ದಿನಾಂಕ 30.06.2014ರಲ್ಲಿದ್ದಂತೆ ಜೇಷ್ಠತಾ ಸಂಖ್ಯೆ | ಅಧಿಕಾರಿಯ ಹೆಸರು ಶ್ರೀ/ಶ್ರೀಮತಿ | ಪಿ.ಡಿ.ಓ ಹುದ್ದೆಯಲ್ಲಿ ಹಳೆಯ ಜೇಷ್ಠತಾ ಸಂಖ್ಯೆ | ಪಿ.ಡಿ.ಓ. ಹುದ್ದೆಯಲ್ಲಿ ಹೊಸ ಜೇಷ್ಠತಾ ಸಂಖ್ಯೆ | ಸ.ನಿ.(ಗ್ರಾ.ಉ) ವೃಂದಕ್ಕೆ ವಾಸ್ತವವಾಗಿ ಮುಂಬಡ್ತಿ ನೀಡಿದ ದಿನಾಂಕ |
|---|---|---|---|---|---|
| (1) | (2) | (3) | (4) | (5) | (6) |
| 1) | 7(ಎ) | ಹೇಮಾವತಿ | 435(ಎ) | 11(ಎ) | 13.08.2013 |
| 2) | 7(ಬಿ) | ಕೆ.ರಂಗೇಗೌಡ | 435(ಬಿ) | 11(ಬಿ) | 13.08.2013 |
| 3) | 7(ಸಿ) | ಟಿ.ಹನುಮಂತೇಗೌಡ | 435(ಸಿ) | 11(ಸಿ) | 13.08.2013 |

ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ವೃಂದದಲ್ಲಿ ದಿನಾಂಕ 30.06.2014ರಲ್ಲಿ ಇದ್ದಂತೆ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು (ಸೇರ್ಪಡೆ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್‌ಸೈಟ್‌ನಲ್ಲಿ ಎಲ್ಲರ ಗಮನಕ್ಕೆ ಪ್ರಕಟಿಸಲಾಗಿದೆ. ಸದರಿ ಜೇಷ್ಠತಾ ಪಟ್ಟಿಯ ಬಗ್ಗೆ

ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ, ಸಂಬಂಧಪಟ್ಟ ಅಧಿಕಾರಿಗಳು ಲಿಖಿತ ಮೂಲಕ ಈ ಅಧಿಸೂಚನೆಯನ್ನು ಪ್ರಕಟಿಸಲಾದ ದಿನಾಂಕದಿಂದ 15 ದಿನಗಳೊಳಗಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಸಲ್ಲಿಸತಕ್ಕದ್ದು. ಸದರಿ ಕಾಲಮಿತಿಯೊಳಗೆ ಸ್ವೀಕರಿಸದ ಸಲಹೆ/ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ಈ ಜೇಷ್ಠತಾಪಟ್ಟಿಯು ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಪ್ರಸ್ತುತ ಬಾಕಿಯಿರುವ ಅರ್ಜಿ ಸಂಖ್ಯೆ:6801-05/2011 ಮತ್ತು ಮಾನ್ಯ ಉಚ್ಛ ನ್ಯಾಯಾಲಯ, ಧಾರವಾಡ ಪೀಠದಲ್ಲಿ ದಾಖಲಿಸಿರುವ ರಿಟ್ ಅರ್ಜಿ ಸಂಖ್ಯೆ:103129-103515/2004 ಹಾಗೂ ಕರ್ನಾಟಕ ಆಡಳಿತ ನ್ಯಾಯಮಂಡಳಿಯ ಅರ್ಜಿ ಸಂಖ್ಯೆ:2123-2168/2014ರ ಹಾಗೂ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಇತರೆ ದಾವೆಗಳ ಅಂತಿಮ ತೀರ್ಪಿಗೆ ಒಳಪಟ್ಟಿರುವಂತೆ ಪ್ರಕಟಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

04/04/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು-ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:-**

1) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇವರಿಗೆ ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ, 50 ಆದೇಶದ ಪ್ರತಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕಳುಹಿಸಲು ಕೋರಿದೆ.

**ಪ್ರತಿ ಇವರಿಗೆ:-**

1) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನಾ ಫಲಕದಲ್ಲಿ ಪ್ರಕಟಿಸಲು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4) ಸಂಬಂಧಪಟ್ಟ ಅಧಿಕಾರಿಗಳಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ ಇವರ ಮುಖಾಂತರ.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.